**OS 67/2015** **PW-1**

**ಸಾಕ್ಷಿಗೆ ದಿನಾಂಕ 04-07-2025ರಂದು ಕರೆಯಿಸಿ ಪ್ರಮಾಣ ವಚನ ಭೋದಿಸಲಾಯಿತು**

**ಮುಖ್ಯ ವಿಚಾರಣೆ ವಾದಿ ಪರ ಶ್ರೀ ಎಸ್.ಎನ್.ಜೆ. ವಕೀಲರಿಂದ**

ನಾನು ನನ್ನ ಸಾಕ್ಷ್ಯವನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿರುತ್ತೇನೆ. ಅದರಲ್ಲಿ ಬರೆದ ವಿಷಯಗಳು ಸತ್ಯ ಮತ್ತು ನಿಜ ಇರುತ್ತದೆ ಆದ್ದರಿಂದ ಸದರಿ ನನ್ನ ಪ್ರಮಾಣ ಪತ್ರವನ್ನು ಮುಖ್ಯ ವಿಚಾರಣೆಯನ್ನಾಗಿ ಪರಿಗಣಿಸಬೇಕಾಗಿ ಪ್ರಾರ್ಥಿಸುತ್ತೇನೆ.

ಮೂಲ ದಾವೆ ನಂ. 228/2011ರ ಆರ್ಡರಶೀಟ್ ನ ಧೃಢೀಕೃತ ನಕಲನ್ನು ಹಾಜರುಪಡಿಸಿದ್ದು, ಅದನ್ನು ನಿಶಾನೆ ಪಿ-1 ಎಂದು, ಎಂ.ಎ. ನಂ. 15/2019ರ ಆದೇಶದ ಧೃಡೀಕೃತ ನಕಲನ್ನು ಹಾಜರುಪಡಿಸಿದ್ದು, ಅದನ್ನು ನಿಶಾನೆ ಪಿ-2 ಎಂದು, ಸರ್ವೆ ನಂ. 100ರ 2014-15 ಮತ್ತು 2015-16ರ ಪಹಣಿ ಪತ್ರಿಕೆಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ಕ್ರಮವಾಗಿ ನಿಶಾನೆ ಪಿ-3 ಮತ್ತು ಪಿ-4 ಎಂದು, ಮೂಲ ದಾವೆ ನಂ. 228/2011ರ ರಾಜಿ ಡಿಕ್ರಿಯ ಧೃಡೀಕೃತ ನಕಲನ್ನು ಹಾಜರುಪಡಿಸಿದ್ದು, ಅದನ್ನು ನಿಶಾನೆ ಪಿ-5 ಎಂದು, ಮೂಲ ದಾವೆ ನಂ. 228/2011ರಲ್ಲಿ ಸಲ್ಲಿಸಿದ ರಾಜೀ ಅರ್ಜಿಯ ಧೃಡೀಕೃತ ನಕಲನ್ನು ಹಾಜರುಪಡಿಸಿದ್ದು, ನಿಶಾನೆ ಪಿ-6 ಎಂದು, ಎಂ.ಆರ್. ನಂ. ಎಚ್-6/2015-16 ನ್ನು ಹಾಜರುಪಡಿಸಿದ್ದು, ಅದನ್ನು ನಿಶಾನೆ ಪಿ-7ಎಂದು, ತಹಸೀಲ್ದಾರ ಚಿತ್ತಾಪೂರ ರವರ ಆದೇಶದ ಪ್ರತಿಯನ್ನು ಹಾಜರುಪಡಿಸಿದ್ದು, ಅದನ್ನು ನಿಶಾನೆ ಪಿ-8 ಎಂದು ಗುರುತಿಸಲಾಯಿತು.

(ಈ ಹಂತದಲ್ಲಿ ಪ್ರತಿವಾದಿ ಪರ ವಕೀಲರು ಪಾಟೀ ಸವಾಲಿಗೆ ಸಮಯವಕಾಶ ಕೋರಿದ್ದು, ಸಮಯ ನೀಡಿ ಮುಂದೂಡಲಾಯಿತು.)

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು.)

ಓ. ಹೇ . ಕೇ. ಸರಿ ಇದೆ.

ಸಿವಿಲ್ ನ್ಯಾಯಾಧೀಶರು, ಚಿತ್ತಾಪೂರ.